**All India Radio: Bangalore**
**Regional Bulletin In Kannada**
**18.03.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**18.03.2025 / 2.30 p.m.**
**<><><><>**

ಮುಖ್ಯಾಂಶಗಳು

1. ನೆಲಮಂಗಲ ಸಮೀಪದ ದಾಸನಪುರದಲ್ಲಿ ೩೦೬ ಕೋಟಿ ರೂಪಾಯಿ ವೆಚ್ಚದಲ್ಲಿ ಸುಸಜ್ಜಿತ ಕೃಷಿ ಮಾರುಕಟ್ಟೆ ನಿರ್ಮಾಣ - ಸಚಿವ ಶಿವಾನಂದಪಾಟೀಲ್
2. ರಾಜ್ಯದಲ್ಲಿ ಹದಗೆಟ್ಟ ಕಾನೂನು ಸುವ್ಯವಸ್ಥೆ ; ವಿಧಾನಸಭೆಯಲ್ಲಿ ಬಿಜೆಪಿ ಆರೋಪ
3. ಇದೇ ೨೧ ರಿಂದ ರಾಜ್ಯಾದ್ಯಂತ ಎಸ್‌ಎಸ್‌ಎಲ್‌ಸಿ ಪರೀಕ್ಷೆ ; ಎಲ್ಲಾ ಜಿಲ್ಲೆಗಳಲ್ಲಿ ಸಕಲ ಸಿದ್ಧತೆ
4. ಗ್ರೇಟರ್ ಬೆಂಗಳೂರು ಮಸೂದೆಗೆ ಅಂಕಿತ ಹಾಕದಂತೆ ವಿವಿಧ ಸಂಘಟನೆಗಳ ಆಗ್ರಹ

<><><><>

ರಾಜ್ಯದಲ್ಲಿ ಪ್ರಸ್ತುತ ೧೬೧ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ಹಾಗೂ ೪೧೦ ಉಪ ಮಾರುಕಟ್ಟೆಗಳು ಕಾರ್ಯ ನಿರ್ವಹಿಸುತ್ತಿವೆ ಎಂದು ಸಚಿವ ಶಿವಾನಂದ ಪಾಟೀಲ್ ವಿಧಾನಪರಿಷತ್ತಿಗೆ ಇಂದು ತಿಳಿಸಿದರು. ಪ್ರಶ್ನೋತ್ತರ ಅವಧಿಯಲ್ಲಿ ಉತ್ತರಿಸಿದ ಸಚಿವರು, ಸ್ವತಂತ್ರಮಾರುಕಟ್ಟೆ ಸಮಿತಿ ಸ್ಥಾಪನೆಗೆ ಸಂಬಂಧಪಟ್ಟಂತೆ ಬರುವ ಬೇಡಿಕೆಗಳನ್ನು ಕುರಿತು ಆರ್ಥಿಕ ಸಮೀಕ್ಷೆ ನಡೆಸಿದ ನಂತರ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಬೆಂಗಳೂರಿನ ಯಶವಂತಪುರ, ಎಪಿಎಂಸಿ ಮಾರುಕಟ್ಟೆಯಲ್ಲಿ ವಾಹನದಟ್ಟಣೆ ದಿನೇ ದಿನೇ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ನೆಲಮಂಗಲ ಸಮೀಪದ ದಾಸನಪುರದಲ್ಲಿ ೩೦೬ ಕೋಟಿ ರೂಪಾಯಿ ವೆಚ್ಚದಲ್ಲಿ ವಿಶಾಲ ಮಾರುಕಟ್ಟೆ ಅಭಿವೃದ್ಧಿಪಡಿಸಲಾಗಿದೆ. ಎಪಿಎಂಸಿಗಳನ್ನು ಹೊರತುಪಡಿಸಿ ರೈತರು ತಮ್ಮ ಕೃಷಿ ಉತ್ಪನ್ನಗಳನ್ನು ಮಾರಾಟ ಮಾಡಲು ಕಾಯ್ದೆಯಡಿ ಅವಕಾಶ ಕಲ್ಪಿಸಿ ೪ ಖಾಸಗಿ ಮಾರುಕಟ್ಟೆ ಹಾಗೂ ೬೫ ನೇರ ಖರೀದಿ ಕೇಂದ್ರಗಳನ್ನು ಆರಂಭಿಸಲು ಅನುಮತಿ ನೀಡಲಾಗಿದೆ. ಯಶವಂತಪುರ ಮಾರುಕಟ್ಟೆಯಿಂದ ಈರುಳ್ಳಿ, ಬೆಳ್ಳುಳ್ಳಿ, ಆಲೂಗಡ್ಡೆ ಮತ್ತು ಶುಂಠಿ ಸೇರಿದಂತೆ ೪ ಉತ್ಪನ್ನಗಳನ್ನು ದಾಸನಪುರ ಉಪಮಾರುಕಟ್ಟೆಗೆ ಸ್ಥಳಾಂತರಿಸಲಾಗುವುದು ಎಂದು ಸಚಿವರು ಸ್ಪಷ್ಟಪಡಿಸಿದರು.

<><><><>

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ, ವಿಧಾನಸಭೆಯಲ್ಲಿಂದು ಆರೋಪಿಸಿದ್ದಾರೆ. ನಿಯಮ ೬೯ ರಡಿ ಸದನದಲ್ಲಿ ಈ ವಿಷಯ ಪ್ರಸ್ತಾಪಿಸಿದ ಅವರು, ಬಿಡದಿ ಬಳಿ ಪಾಕಿಸ್ತಾನ ಜಿಂದಾಬಾದ್ ಎಂಬ ಘೋಷಣೆಗಳನ್ನು ಕೆಲವು ಕಿಡಿಗೇಡಿಗಳು ಬರೆದಿದ್ದಾರೆ. ಕೆಲವು ಕಡೆ ಕನ್ನಡಿಗರನ್ನು ಅವಮಾನಿಸುವ ಬರಹಗಳನ್ನು ಬಳಸಲಾಗಿದೆ. ಇದಕ್ಕೆ ಕಾರಣರಾದವರ ವಿರುದ್ಧ ಸರ್ಕಾರ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಸಿಸಿ ಟಿವಿಗಳ ಸಹಾಯದಿಂದ ಆರೋಪಿಗಳು

ಮತ್ತು ಕಿಡಿಗೇಡಿಗಳನ್ನು ಪತ್ತೆಹಚ್ಚಿ ಕಾನೂನು ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಏನು ತೊಂದರೆ ಎಂದು ಅವರು ಪ್ರಶ್ನಿಸಿದರು. ಮತ್ತೊಬ್ಬ ಶಾಸಕ ಸುನೀಲ್ ಕುಮಾರ್ ವಿಷಯ ಪ್ರಸ್ತಾಪಿಸುತ್ತ ರಾಜ್ಯಕ್ಕೆ ಭೇಟಿ ನೀಡುವ ವಿದೇಶಿಯರ ಮೇಲೆ ಹಲ್ಲೆ ದೌರ್ಜನ್ಯ ನಡೆಯುತ್ತಿದೆ. ಇದರಿಂದ ಕೆಟ್ಟ ಹೆಸರು ಬರುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

<><><><>

ಇದೇ ೨೧ ರಿಂದ ರಾಜ್ಯಾದ್ಯಂತ ಎಸ್.ಎಸ್.ಎಲ್.ಸಿ. ಪರೀಕ್ಷೆಗಳು ಆರಂಭವಾಗಲಿದೆ. ಇದಕ್ಕಾಗಿ ಎಲ್ಲ ಜಿಲ್ಲೆಗಳಲ್ಲಿ ಸಕಲ ಸಿದ್ಧತೆ ಪೂರ್ಣಗೊಂಡಿದೆ. ಕಾರವಾರದಲ್ಲಿಂದು ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯ ಮಾತನಾಡಿ, ವಿದ್ಯಾರ್ಥಿಗಳು ಯಾವುದೇ ಆತಂಕ, ಭಯಗಳಿಗೆ ಒಳಗಾಗದೇ ಆತ್ಮವಿಶ್ವಾಸದಿಂದ ಪರೀಕ್ಷೆ ಬರೆಯಬೇಕೆಂದು ಕಿವಿಮಾತು ಹೇಳಿದರು. ಅವರು ಕಾರವಾರ ತಾಲೂಕಿನ ಶಿರವಾಡದ ಪ್ರೌಢಶಾಲೆಗೆ ಭೇಟಿ ನೀಡಿ, ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಮೊಬೈಲ್, ಟಿವಿ ಸೇರಿದಂತೆ ಇತರೇ ಯಾವುದೇ ವಸ್ತು ಮತ್ತು ಉಪಕರಣಗಳಿಂದ ದೂರ ಉಳಿದು ಪರೀಕ್ಷೆಯಲ್ಲಿ ಯಶಸ್ಸು ಸಾಧಿಸುವ ಕಡೆಗೆ ಗಮನ ಹರಿಸಬೇಕು. ಎಸ್‌ಎಸ್‌ಎಲ್‌ಸಿ ಪರೀಕ್ಷೆ ವಿದ್ಯಾರ್ಥಿಗಳು ಕಷ್ಟಪಟ್ಟು ಅಧ್ಯಯನ ಮಾಡಿ ಯಶಸ್ಸುಗಳಿಸಬೇಕು ಎಂದು ಹೇಳಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಪರೀಕ್ಷೆಗಾಗಿ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ. ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಎಸ್.ಎಸ್.ಎಲ್.ಸಿ ಪರೀಕ್ಷೆಯ ಫಲಿತಾಂಶ ಉತ್ತಮಪಡಿಸುವ ನಿಟ್ಟಿನಲ್ಲಿ ಅಧಿಕಾರಿಗಳೊಂದಿಗೆ ಪರಾಮರ್ಶೆ ಮಾಡಲಾಗಿದೆ ಎಂದು ಅವರು ಹೇಳಿದರು.

<><><><>

ಬಾಗಲಕೋಟೆ ತೋಟಗಾರಿಕಾ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿಗೆ ವಿಧಾನ ಪರಿಷತ್ ಸದಸ್ಯರೊಬ್ಬರನ್ನು ಇಂದು ಸಂಜೆಯೊಳಗಾಗಿ ನೇಮಕ ಮಾಡುವಂತೆ ವಿಧಾನಪರಿಷತ್ ಸಭಾಪತಿ ಬಸವರಾಜು ಹೊರಟ್ಟಿ ಸರ್ಕಾರಕ್ಕೆ ತಾಕೀತು ಮಾಡಿದ್ದಾರೆ. ಪ್ರಶ್ನೋತ್ತರ ಅವಧಿಯಲ್ಲಿ ತೋಟಗಾರಿಕಾ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರ ಉತ್ತರದಿಂದ ಸದಸ್ಯರು ಅಸಮಾಧಾನಗೊಂಡ ಸಂದರ್ಭದಲ್ಲಿ ಮಧ್ಯಪ್ರವೇಶಿಸಿದ ಸಭಾಪತಿ ಹೊರಟ್ಟಿ ಇಂದು ಸಂಜೆಯೊಳಗಾಗಿ ನೇಮಕಾತಿ ಆದೇಶ ಹೊರಡಿಸಬೇಕು ಎಂದರು. ನಂತರ ಸಭಾಪತಿಯವರ ಸೂಚನೆ ಪಾಲಿಸುವುದಾಗಿ ಸಚಿವರು ಸದನಕ್ಕೆ ಭರವಸೆ ನೀಡಿದರು.

<><><><>

ಬೆಂಗಳೂರು ನಾಗರಿಕರ ಹಿತಾಸಕ್ತಿಗೆ ವಿರುದ್ಧವಾಗಿ ಜಾರಿಗೊಳಿಸುತ್ತಿರುವ ಗ್ರೇಟರ್ ಬೆಂಗಳೂರು ಮಸೂದೆಗೆ ಅಂಕಿತ ಹಾಕದಂತೆ, ವಿವಿಧ ಸಂಘಟನೆಗಳ ಪ್ರತಿನಿಧಿಗಳು ರಾಜ್ಯಪಾಲರನ್ನು ಒತ್ತಾಯಿಸಿದ್ದಾರೆ. ಈ ಸಂಬಂಧ ಬೆಂಗಳೂರಿನಲ್ಲಿ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಪ್ರತಿಭಟನೆ ನಡೆಸಿ, ತದನಂತರ ರಾಜ್ಯಪಾಲರಿಗೆ ಮನವಿ ಪತ್ರ ಸಲ್ಲಿಸಿದರು. ಕರ್ನಾಟಕ ಮುನ್ಸಿಪಲ್ ಕಾರ್ಪೋರೇಷನ್ ಕಾಯ್ದೆ, ಗ್ರೇಟರ್ ಬೆಂಗಳೂರು ಮಸೂದೆಗಳಲ್ಲಿರುವ ಅಂಶಗಳನ್ನು ಪರಿಶೀಲಿಸಲು ತಜ್ಞರ ಸಮಿತಿ ರಚಿಸಬೇಕು ಎಂದು ಒತ್ತಾಯಿಸಲಾಗಿದೆ.

<><><><>

ರಾಜ್ಯದಲ್ಲಿ ಅಲ್ಪ ಸಂಖ್ಯಾತ ಸಮುದಾಯದ ಗುತ್ತಿಗೆದಾರರಿಗೆ ಶೇಕಡ ೪ರಷ್ಟು ಮೀಸಲಾತಿ ಕಲ್ಪಿಸುವ ನಿರ್ಧಾರ ಸಂವಿಧಾನ ಬಾಹಿರ ಕ್ರಮ ಎಂದು ಬಿಜೆಪಿ ನಾಯಕ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ವಿಚಾರ ಸುಪ್ರೀಂಕೋರ್ಟ್ ಮುಂದೆ ಇದ್ದರೂ, ರಾಜ್ಯ ಸರ್ಕಾರ ಈ ರೀತಿ ನಿರ್ಧಾರ ತೆಗೆದುಕೊಂಡಿರುವುದು ಕಾನೂನು ಬಾಹಿರ ಕ್ರಮ. ಸಂವಿಧಾನದ ನಿಯಮಗಳಲ್ಲಿ ಧರ್ಮ ಆಧಾರಿತ ಮೀಸಲಾತಿಗೆ ಅವಕಾಶವಿಲ್ಲ. ಇದನ್ನೇ ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಸಂವಿಧಾನ ರಚನೆ ಸಂದರ್ಭದಲ್ಲಿ ಸ್ಪಷ್ಟವಾಗಿ ಹೇಳಿದ್ದಾರೆ. ಆದರೆ ಕಾಂಗ್ರೆಸ್ ಸರ್ಕಾರ ಅಂಬೇಡ್ಕರ್ ಆಶಯದ ಮೂಲ ತತ್ವಗಳಿಗೆ ವಿರುದ್ಧವಾಗಿ ನಡೆದುಕೊಳ್ಳುತ್ತಿದೆ ಎಂದು ಅಸಮಾಧಾನ ಹೊರಹಾಕಿದರು.

**ಧ್ವನಿ : ಬಸವರಾಜ ಬೊಮ್ಮಾಯಿ (೩೭ ಸೆಕೆಂಡ್‌ಗಳು)**

<><><><>

ನಾರಾಯಣಪುರ ಜಲಾಶಯದ ಕಾಲುವೆ ನೀರನ್ನೇ ನೆಚ್ಚಿಕೊಂಡು ರೈತರು ಹಿಂಗಾರು ಹಂಗಾಮಿನ ಬೆಳೆಗಳನ್ನು ಬೆಳೆದಿದ್ದಾರೆ. ಆ ರೈತರ ಬೆಳೆ ಕೈಸೇರಲು ಏಪ್ರಿಲ್ ೧೫ರವರಗೆ ನೀರು ಹರಿಸಬೇಕು ಎಂದು ಮಾಜಿ ಸಚಿವ ರಾಜೂಗೌಡ ಮನವಿ ಮಾಡಿದರು. ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ನಾರಾಯಣಪುರ ಗ್ರಾಮದಲ್ಲಿರುವ ಮುಖ್ಯ ಎಂಜಿನಿಯರ್‌ಗೆ ಮನವಿ ಸಲ್ಲಿಸಿ ಮಾತನಾಡಿದರು. ಎಡದಂಡೆ ಮುಖ್ಯ ಕಾಲುವೆಗಳಿಗೆ ೧೦ ಸಾವಿರ ಕ್ಯೂಸೆಕ್ ಬದಲಿಗೆ ೬ ರಿಂದ ೭ ಸಾವಿರ ಕ್ಯೂಸೆಕ್‌ವರೆಗೆ ನೀರು ಹರಿಸಲಾಗುತ್ತಿದೆ. ಇದರಿಂದಾಗಿ ಕಾಲುವೆ ಕೊನೆ ಭಾಗದ ರೈತರಿಗೆ ನಿಗದಿತ ಸಮಯಕ್ಕೆ ನೀರು ತಲುಪುತ್ತಿಲ್ಲ. ಸದ್ಯ ಬಿಸಿಲಿನ ಪ್ರಖರತೆ ಏರುತ್ತಿದೆ. ಬೆಳೆಗಳು ಒಣಗಿ ಹೋಗುತ್ತಿವೆ ಇದರಿಂದ ಅಪಾರ ಪ್ರಮಾಣದ ಬೆಳೆ ಹಾನಿಯಾಗಲಿದೆ ಎಂದು ರೈತರು ದೂರಿದ್ದಾರೆ ಎಂದರು. ಮನವಿ ಸ್ವೀಕರಿಸಿದ ಮುಖ್ಯ ಎಂಜಿನಿಯರ್ ಆರ್.ಮಂಜುನಾಥ್ ಮಾತನಾಡಿ, ಕಾಲುವೆ ಕೊನೆ ಅಂಚಿನ ಜಮೀನಿಗೆ ನೀರು ತಲುಪಿಸುವುದೇ ನಮ್ಮ ಮುಖ್ಯ ಉದ್ದೇಶವಾಗಿದೆ ಎಂದರು.

<><><><>

ಜೈನ್ ಸಮುದಾಯದ ಅಭಿವೃದ್ಧಿಗಾಗಿ ಪ್ರತ್ಯೇಕ ಮಂಡಳಿ ರಚನೆ ಸೇರಿದಂತೆ ವಿವಿಧ ಬೇಡಿಕೆಗಳನ್ನು ನಾಳೆಯೊಳಗಾಗಿ ಈಡೇರಿಸಬೇಕೆಂದು ಹುಬ್ಬಳ್ಳಿಯ ನವಕ್ಷೇತ್ರದ ರಾಷ್ಟ್ರ ಸಂತ ಆಚಾರ್ಯ ಗುಣಧರನಂದಿ ಮಹಾರಾಜರು ಸರ್ಕಾರವನ್ನು ಒತ್ತಾಯಿಸಿದ್ದಾರೆ. ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ ಬೇಡಿಕೆ ಈಡೇರಿಸುವಂತೆ ಸರ್ಕಾರಕ್ಕೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಅವರು ಹೇಳಿದರು.

<><><><>

ಬಳ್ಳಾರಿ ಜಿಲ್ಲೆಯ ಕಂಪ್ಲಿ, ಕುರುಗೋಡು, ಸಿರುಗುಪ್ಪ ಮತ್ತು ಬಳ್ಳಾರಿ ಗ್ರಾಮೀಣ ಭಾಗದಲ್ಲಿ ಬೆಳೆದು ನಿಂತಿರುವ ಭತ್ತದ ಬೆಳೆ ಸಂರಕ್ಷಣೆಗಾಗಿ ತುಂಗಭದ್ರ ಬಲದಂಡೆ ಕಾಲುವೆಯಿಂದ ಏಪ್ರಿಲ್ ೧೦ರವರೆಗೆ ನೀರು ಹರಿಸಬೇಕೆಂದು ರೈತ ಸಂಘ ಒತ್ತಾಯಿಸಿದೆ. ಈ ಸಂಬಂಧ ತುಂಗಭದ್ರ ರೈತ ಸಂಘದ ಅಧ್ಯಕ್ಷ ದರೂರು ಪುರುಷೋತ್ತಮ ಗೌಡ

ಸರ್ಕಾರಕ್ಕೆ, ಶಾಸಕರಿಗೆ, ಸಚಿವರಿಗೆ ಪತ್ರ ಬರೆದು ರೈತರು ಕಷ್ಟಪಟ್ಟು ಬೆಳೆದಿರುವ ಬೆಳೆ ಉಳಿಸಿಕೊಳ್ಳಲು ಏಪ್ರಿಲ್ ೧೦ರವರೆಗೆ ನಿರಂತರವಾಗಿ ನೀರು ಹರಿಸಬೇಕು ಎಂದು ಒತ್ತಾಯಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>